ಬಹುಭಾಷಾ ನಟಿ ಶ್ರೀಲೀಲಾ ಅವರು ಮತ್ತೊಂದು ತೆಲುಗಿನ ಬೃಹತ್ ಸಿನಿಮಾಗೆ ಸಹಿ ಮಾಡಿದ್ದಾರೆ ಎನ್ನಲಾಗಿದೆ. ಆದರೆ ಸಿನಿಮಾ ಯಾರು, ನಟ ಹಾಗೂ ಇತರ ಮಾಹಿತಿ ಲಭಿಸಿಲ್ಲ. ಇತ್ತೀಚೆಗೆ ಶ್ರೀಲೀಲಾ ಅವರ ಖ್ಯಾತಿ ಕುಗ್ಗುತ್ತಿತ್ತು ಎನ್ನುತ್ತಿದ್ದ ಬೆನ್ನಲ್ಲೇ ಬಿಗ್ ಬಜೆಟ್ ಮೂವಿಯೊಂದರಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ. ಮತ್ತಷ್ಟು ಮಾಹಿತಿಯನ್ನು ಶೀಘ್ರ ತಿಳಿಸುತ್ತೇನೆ ಎಂದು ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಬರೆದುಕೊಂಡಿದ್ದಾರೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಹೋರಾಟಕ್ಕೆ ಮುಂದಾದ ಆಟೋ ಸಂಘಟನೆಗಳು

ಬೆಂಗಳೂರು: ಅತ್ತ ಇರಾನ್ ಇಸ್ರೇಲ್ ಸಂಘರ್ಷ ನಿಲ್ಲುತ್ತಿಲ್ಲ. ಇತ್ತ ಆಟೋ ಚಾಲಕರಿಗೆ ಎದುರಾಗಿರುವ ಎಲ್‌ಪಿಜಿ ಅಭಾವ ನೀಗುತ್ತಿಲ್ಲ. ಇದರ ಮಧ್ಯೆ ಸಮಸ್ಯೆಗೆ ಧ್ವನಿಯಾಗಿ, ಸಂಕಷ್ಟದಲ್ಲಿ ಜೊತೆಯಾಗಬೇಕಿದ್ದ ಸರ್ಕಾರದ ಜನಪ್ರತಿನಿಧಿಗಳು ಇಲ್ಲಿವರೆಗೆ ಸಮಸ್ಯೆ ಕೇಳಿಲ್ಲ. ಈ ಬಗ್ಗೆ ಕೆರಳಿರುವ ಆಟೋ ಸಂಘಟನೆಗಳು, ಸರ್ಕಾರಕ್ಕೆ ಹೋರಾಟದ ಎಚ್ಚರಿಕೆ ನೀಡಿವೆ.

ಸದ್ಯಕ್ಕೆ ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ನಿಲ್ಲುವ ಲಕ್ಷಣ ಕಾಣಿಸುತ್ತಿಲ್ಲ. ಯುದ್ಧ ನಿಲ್ಲದೇ ರಾಜ್ಯದಲ್ಲಿ ಎದುರಾಗಿರೋ ಎಲ್‌ಪಿಜಿ ಅಭಾವ ಕೂಡ ದೂರವಾಗಿಲ್ಲ. ಆದರೆ ಇದರ ನೇರ ಎಫೆಕ್ಟ್ ಎದುರಿಸುತ್ತಿರುವ ಆಟೋ ಚಾಲಕರ ಗೋಳು ದಿನ ಕಳೆದಂತೆ ಹೇಳತೀರದಂತಾಗುತ್ತಿದೆ. ಈ ಸಂಕಷ್ಟದ ಸಮಯದಲ್ಲಿ ಆಟೋ ಚಾಲಕರ ಸಹಾಯಕ್ಕೆ ಧಾವಿಸಬೇಕಿದ್ದ ಸರ್ಕಾರ ಮಾತ್ರ, ಉಪಚುನಾವಣೆ ಮತ್ತು ಐಪಿಎಲ್ ಮೂಡ್‌ನಲ್ಲಿ ಕಾಲ ಕಳೆಯುತ್ತಿದೆ. ಸರ್ಕಾರದ ಈ ನಡೆ ವಿರುದ್ಧ ಕೆರಳಿರುವ ಆಟೋ ಸಂಘಟನೆಗಳು ಸರ್ಕಾರಕ್ಕೆ ಹೋರಾಟದ ಬಿಸಿ ಮುಟ್ಟಿಸುವ ಎಚ್ಚರಿಕೆ ನೀಡಿವೆ.

ಸಮಸ್ಯೆ ಜೋರಾಗುತ್ತಿದ್ದರೂ ಸರ್ಕಾರ ಇಲ್ಲಿ ತನಕ ಆಟೋ ಚಾಲಕರ ವಿಚಾರವಾಗಿ ಯಾವುದೇ ಕ್ರಮಕ್ಕೆ ಮುಂದಾಗಿಲ್ಲ. ಹೀಗಾಗಿ ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಆಟೋ ಸಂಘಟನೆಗಳು ಸಭೆ ಮಾಡಿ ಹೋರಾಟದ ಹಾದಿ ಹಿಡಿಯಲು ನಿರ್ಧರಿಸಿವೆ. ಸದ್ಯ ಉಪಚುನಾವಣೆ ಪ್ರಚಾರ ಮುಗಿಸಿ ನಾಳೆ ಸಿಎಂ, ಡಿಸಿಎಂ ಸೇರಿದಂತೆ ಸಚಿವರೆಲ್ಲರು ವಾಪಸ್ ಆಗಲಿದ್ದಾರೆ. ಪ್ರಮುಖವಾಗಿ ಆಟೋ ಸಂಘಟನೆಗಳು ಸಿಎಂ, ಡಿಸಿಎಂ, ಸಾರಿಗೆ ಸಚಿವರು, ಆಹಾರ ಸಚಿವರು, ಶಿಕ್ಷಣ ಸಚಿವರ ಭೇಟಿಗೆ ನಿರ್ಧಾರ ಮಾಡಿದ್ದಾರೆ. ಆರ್ಥಿಕ ಹೊಡೆತ ಸಂಬಂಧ ಮನವಿ ಮಾಡಿ, ಆರ್ಥಿಕ ಸಹಾಯಕ್ಕೆ ಮನವಿ ಮಾಡಲು ನಿರ್ಧಾರಿಸಲಾಗಿದೆ. ಜೊತೆಗೆ ಮಕ್ಕಳ ಸ್ಕೂಲ್ ಫೀಸ್ ಪಾವತಿಗೆ 2 ತಿಂಗಳ ಸಮಯಾವಕಾಶ ನೀಡುವಂತೆ ಮನವಿ ಮಾಡುವ ಬಗ್ಗೆ ತೀರ್ಮಾನಿಸಿದ್ದಾರೆ.

ಸದ್ಯ ಇದೇ ವಾರದಲ್ಲಿ ಸರ್ಕಾರದ ಜನಪ್ರತಿನಿಧಿಗಳ ಭೇಟಿಗೆ ಆಟೋ ಸಂಘಟನೆಗಳು ನಿರ್ಧಾರ ಮಾಡಿದ್ದು, ಒಂದೊಮ್ಮೆ ಈ ವಾರದಲ್ಲಿ ಸಮಸ್ಯೆ ಸಂಬಂಧ ಸರ್ಕಾರ ಭೇಟಿಗೆ ಅವಕಾಶ ಮಾಡಿಕೊಡದಿದ್ದರೆ ರಾಜ್ಯವ್ಯಾಪಿ ಸಚಿವರ ಮನೆಗಳಿಗೆ ಮುತ್ತಿಗೆ ಹಾಕುವ ಎಚ್ಚರಿಕೆ ನೀಡುತ್ತಿದ್ದಾರೆ. ಅಲ್ಲದೇ ಆಟೋ ಟ್ಯಾಕ್ಸಿ ಬಂದ್ ಮಾಡುವ ಎಚ್ಚರಿಕೆ ಕೂಡ ನೀಡಿದ್ದಾರೆ.

## ಜಲಸಂಧಿ ತೆರೆಯಲ್ಲ

ಟೆಹ್ರಾನ್: ವಿಶ್ವದ ದೊಡ್ಡಣ್ಣ ಟ್ರಂಪ್ ಡೆಡ್‌ಲೈನ್‌ಗೆ ಇರಾನ್ ಕೂಡ ತನ್ನದೇ ದಾಟಿಯಲ್ಲಿ ಕೌಂಟರ್ ನೀಡಿದೆ. ಯುದ್ಧದಿಂದಾಗಿರುವ ನಷ್ಟ ಪರಿಹಾರವಿಲ್ಲದೇ ಹಾರ್ಮುಜ್ ಜಲಸಂಧಿ ತೆರೆಯುವ ಮಾತಿಲ್ಲ ಎಂದು ಅಮೆರಿಕಗೆ ಇರಾನ್ ಹೊಸ ಕಂಡೀಷನ್ ಹಾಕಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ ಹೊಸ ಬೆದರಿಕೆ ಹಾಕಿದ್ದಾರೆ. ಒಪ್ಪಂದಕ್ಕೆ ಬನ್ನಿ ಅಥವಾ ಶರಣಾಗಿ. ಇಲ್ಲವಾದಲ್ಲಿ ಮಂಗಳವಾರ ರಾತ್ರಿ 8 ಗಂಟೆಗೆ ಮಾರಕ ದಾಳಿ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಆದರೆ ಇರಾನ್ ಹಿಂದೆ ಸರಿಯಲು ಸಿದ್ಧವಿಲ್ಲ. ಯುದ್ಧದಿಂದಾಗಿರುವ ನಷ್ಟ ತುಂಬಿಕೊಡುವಂತೆ ಷರತ್ತು ವಿಧಿಸುವ ಮೂಲಕ ಟ್ರಂಪ್ ನರಕ ದರ್ಶನದ ಎಚ್ಚರಿಕೆಗೆ ಇರಾನ್ ಪ್ರತ್ಯುತ್ತರ ನೀಡಿದೆ.

ಭಾನುವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೆ 48 ಗಂಟೆಗಳ ಹೊಸ ಡೆಡ್‌ಲೈನ್ ನೀಡಿದ್ದು, ಮಂಗಳವಾರ ಮುಗಿಯಲಿದೆ.

ಈ ನಡುವೆ ಹುಚ್ಚರೇ, ಜಲಸಂಧಿಯನ್ನು ತೆರೆಯಿರಿ, ಇಲ್ಲದಿದ್ದರೆ ನೀವು ನರಕಕ್ಕೆ ಹೋಗುತ್ತೀರಿ ಎಂದು ಕಟು ಪದಗಳಲ್ಲಿ ಇರಾನ್ ನಾಯಕರನ್ನು ಟ್ರಂಪ್ ಎಚ್ಚರಿಸಿದ್ದಾರೆ. ಅಲ್ಲದೇ ಇಂದು ಟ್ರಂಪ್ ಸಾರ್ವಜನಿಕ ಭಾಷಣ ಮಾಡಲಿದ್ದು, ಇರಾನ್‌ಗೆ ಕಡೆಯ ಎಚ್ಚರಿಕೆ ನೀಡುವ ಸಾಧ್ಯತೆ ಇದೆ.

ಎಲ್‌ಪಿಜಿ ಬಿಕ್ಕಟ್ಟು ಪೂರೈಸಲು 5 ಕೆಜಿ ಸಿಲಿಂಡರ್ ಪೂರೈಕೆ ಹೆಚ್ಚಿಸಿದ ಬೆನ್ನಲ್ಲೇ ಇವುಗಳ ಖರೀದಿಗೂ ಜನ ಆಸಕ್ತಿ ತೋರಿದ್ದಾರೆ. ಕಳೆದ ಮಾರ್ಚ್ 23 ರಿಂದ ದೇಶದಲ್ಲಿ ಸುಮಾರು 6.6 ಲಕ್ಷ ಸಿಲಿಂಡರ್‌ಗಳು ಮಾರಾಟವಾಗಿದೆ. ಸದ್ಯ ಈ ಸಣ್ಣ ಸಿಲಿಂಡರ್‌ಗಳು ಮಾರುಕಟ್ಟೆಯಲ್ಲಿ ಲಭ್ಯವಿದ್ದು, ಜನ ಸೂಕ್ತ ದಾಖಲಾತಿ ನೀಡಿ ಗ್ಯಾಸ್ ಏಜೆನ್ಸಿಗಳಿಂದ ಖರೀದಿಸಬಹುದು ಎಂದು ಪೆಟ್ರೋಲಿಯಂ ಸಚಿವಾಲಯ ಹೇಳಿದೆ.

# ಅನಿಲ ಸಮಸ್ಯೆ ಇಲ್ಲ

ನವದೆಹಲಿ: ಅಮೆರಿಕ ಮತ್ತು ಇರಾನ್ ನಡುವಿನ ಯುದ್ಧ 38ನೇ ದಿನಕ್ಕೆ ಕಾಲಿಟ್ಟಿದೆ. ಇದರಿಂದ ಎಲ್‌ಪಿಜಿ ಕೊರತೆ ಆತಂಕದಲ್ಲಿದ್ದ ಜನಕ್ಕೆ ಕೇಂದ್ರ ಸರ್ಕಾರ ಮತ್ತೆ ಅಭಯ ನೀಡಿದೆ. ದೇಶದಲ್ಲಿ ಎಲ್‌ಪಿಜಿ ಕೊರತೆ ಇಲ್ಲ ಎಂದಿರುವ ಕೇಂದ್ರ ಸರ್ಕಾರ ಮತ್ತೊಂದು ಕಡೆ ಕೊರತೆ ನೀಗಿಸಲು 5 ಕೆಜಿ ಗ್ಯಾಸ್ ಸಿಲಿಂಡರ್‌ಗಳ ಪೂರೈಕೆಯನ್ನ ಹೆಚ್ಚಿಸಿದೆ.




ಭಾರತದಲ್ಲಿ ಎಲ್‌ಪಿಜಿ ಕೊರತೆಯಿಲ್ಲ, ಸಾಕಷ್ಟು ಲಭ್ಯವಿದೆ.

ಜನರು ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. 5 ಕೆಜಿ ತೂಕದ ಎಲ್‌ಪಿಜಿ ಸಿಲಿಂಡರ್‌ಗಳು ಎಲ್ಲ ಏಜೆನ್ಸಿಗಳಲ್ಲೂ ಲಭ್ಯವಿದೆ. ಸೂಕ್ತ ಗುರುತಿನ ಚೀಟಿ ತೋರಿಸಿ ಗ್ರಾಹಕರು ಸಿಲಿಂಡರ್ ಪಡೆಯಬಹುದು ಎಂದು ಕೇಂದ್ರ ಸರ್ಕಾರ ಹೇಳಿದೆ.

ಎಲ್‌ಪಿಜಿ ಬಿಕ್ಕಟ್ಟು ಪೂರೈಸಲು 5 ಕೆಜಿ ಸಿಲಿಂಡರ್ ಪೂರೈಕೆ ಹೆಚ್ಚಿಸಿದ ಬೆನ್ನಲ್ಲೇ ಇವುಗಳ ಖರೀದಿಗೂ ಜನ ಆಸಕ್ತಿ ತೋರಿದ್ದಾರೆ. ಕಳೆದ ಮಾರ್ಚ್ 23 ರಿಂದ ದೇಶದಲ್ಲಿ ಸುಮಾರು 6.6 ಲಕ್ಷ ಸಿಲಿಂಡರ್‌ಗಳು ಮಾರಾಟವಾಗಿದೆ. ಸದ್ಯ ಈ ಸಣ್ಣ ಸಿಲಿಂಡರ್‌ಗಳು ಮಾರುಕಟ್ಟೆಯಲ್ಲಿ ಲಭ್ಯವಿದ್ದು, ಜನ ಸೂಕ್ತ ದಾಖಲಾತಿ ನೀಡಿ ಗ್ಯಾಸ್ ಏಜೆನ್ಸಿಗಳಿಂದ ಖರೀದಿಸಬಹುದು ಎಂದು ಪೆಟ್ರೋಲಿಯಂ ಸಚಿವಾಲಯ ಹೇಳಿದೆ.

5 ಕೆಜಿ ಸಿಲಿಂಡರ್ ಖರೀದಿಸಲು ಯಾವುದೇ ವಾಸಸ್ಥಳದ ಸಾಕ್ಷ್ಯ ತೋರಿಸುವ ಅಗತ್ಯವಿಲ್ಲ. ಆದ್ರೆ ಯಾವುದಾದರೂ ಒಂದು ಗುರುತಿನ ಚೀಟಿ ಮಾತ್ರ ತೋರಿಸಿ, ಸಿಲಿಂಡರ್ ಖರೀದಿ ಮಾಡಬಹುದು ಎಂದು ಸರ್ಕಾರ ಹೇಳಿದೆ.

ಮನೆಗಳಿಗೆ, ಸಾರಿಗೆ ವ್ಯವಸ್ಥೆ ಹಾಗೂ ಇನ್ನಿತರ ಅಗತ್ಯ ಕಾರ್ಯಗಳಿಗೆ ಪೆಟ್ರೋಲ್, ಡೀಸೆಲ್, ಅನಿಲ ಪೂರೈಕೆಯನ್ನು ಕಾಯ್ದುಕೊಳ್ಳಲಾಗುತ್ತಿದೆ. ರಸಗೊಬ್ಬರ ಘಟಕಗಳಿಗೆ ಪೂರೈಕೆ ಏಪ್ರಿಲ್ 6 ರಿಂದ ಸರಾಸರಿ ಬಳಕೆಯ ಸರಿಸುಮಾರು 90% ರಷ್ಟು ಹೆಚ್ಚಾಗುವ ನಿರೀಕ್ಷೆಯಿದೆ.

ಅದಕ್ಕಾಗಿ ದೇಶಾದ್ಯಂತ ಎಲ್ಲಾ ಸಂಸ್ಕರಣಾಗಾರಗಳು ಸಾಕಷ್ಟು ಕಚ್ಚಾತೈಲ ನಿಕ್ಷೇಪಗಳೊಂದಿಗೆ ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ದೇಶಾದ್ಯಂತ ಪೆಟ್ರೋಲ್ ಪಂಪ್‌ಗಳು ಸಂಪೂರ್ಣವಾಗಿ ದಾಸ್ತಾನು ಮಾಡಲ್ಪಟ್ಟಿವೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.




## ಬಿಜೆಪಿ-ಎಲ್‌ಡಿಎಫ್ ನಡುವೆ ಒಳ ಒಪ್ಪಂದ

ತಿರುವನಂತಪುರ: "ಯುಡಿಎಫ್ ಮೈತ್ರಿಕೂಟದಿಂದ ಭ್ರಷ್ಟಾಚಾರ ಮುಕ್ತ, ಸ್ವಚ್ಛ, ಪಾರದರ್ಶಕ ಆಡಳಿತ ನೀಡಲಾಗುವುದು. ಸರ್ಕಾರ ಹೊಣೆಗಾರಿಕೆಯಿಂದ ಕೆಲಸ ಮಾಡಲಿದ್ದು, ಕೇರಳಂ ಅಭಿವೃದ್ಧಿಗೆ ಪೂರಕವಾಗಿ ವ್ಯವಸ್ಥೆ ಬದಲಿಸಿ, ಬಂಡವಾಳ ಹೂಡಿಕೆ ತಂದು, ಉದ್ಯೋಗ ಸೃಷ್ಟಿ ಮಾಡುತ್ತೇವೆ. ಉತ್ತಮ ಕೇರಳಂ ರಾಜ್ಯಕ್ಕಾಗಿ ನಮಗೆ ಅವಕಾಶ ನೀಡಿ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಭರವಸೆ ನೀಡಿದರು.

ತಿರುವನಂತಪುರದ ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಶಿವಕುಮಾರ್ ಅವರು ಸೋಮವಾರ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದರು.

"ಇದು ದೇವರ ನಾಡಾಗಿದ್ದು, ತನ್ನದೇ ಆದ ಇತಿಹಾಸ ಹೊಂದಿದೆ. ಆದರೆ ಇಲ್ಲಿ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಾಲಯದಲ್ಲಿ ಚಿನ್ನದ ಕಳವು ಪ್ರಕರಣ ಏನಾಯ್ತು? ಕರ್ನಾಟಕದಲ್ಲಿ ಒಬ್ಬ ಅಧಿಕಾರಿ ಒಂದು ನಿಗಮದಲ್ಲಿ ಸ್ವಲ್ಪ ಕೋಟಿ ಹಣವನ್ನು ವರ್ಗಾವಣೆ ಮಾಡಿದ ಕಾರಣಕ್ಕೆ ಕೇಂದ್ರ ತನಿಖಾ ಸಂಸ್ಥೆಗಳು ದಾಳಿ ಮಾಡಿದವು. ಈ ಪ್ರಕರಣದಲ್ಲಿ ನಮ್ಮ ಸರ್ಕಾರ ರಚಿಸಿದ ವಿಶೇಷ ತನಿಖಾ ತಂಡ 95% ಹಣವನ್ನು ವಸೂಲಿ ಮಾಡಿದರೂ ಸಿಬಿಐ, ಇಡಿ ಮಧ್ಯ ಪ್ರವೇಶ ಮಾಡಿ ನಮ್ಮ ಸಚಿವರನ್ನು ಬಂಧಿಸಿತು. ನಾವು ನಮ್ಮ ಸಚಿವರ ರಾಜೀನಾಮೆ ಕೊಡಿಸಿದರೂ ಇಷ್ಟೆಲ್ಲಾ ಹಸ್ತಕ್ಷೇಪ ಮಾಡಿದರು. ಆದರೆ ಶಬರಿಮಲೆ ಚಿನ್ನ ಕಳವು ವಿಚಾರದಲ್ಲಿ ನ್ಯಾಯಾಲಯ ಖಂಡನೆ ಮಾಡಿದರೂ ಸಿಬಿಐ ಈ ಪ್ರಕರಣದಲ್ಲಿ ಮಧ್ಯಪ್ರವೇಶ ಮಾಡಲಿಲ್ಲ ಯಾಕೆ? ಈ ಪ್ರಕರಣದಲ್ಲಿ ಸತ್ಯಾಂಶ ಹೊರಗೆ ಬಂದು ನ್ಯಾಯ ಒದಗಿಸಲಿಲ್ಲ? ಪ್ರಕರಣದಲ್ಲಿ ಆರೋಪಪಟ್ಟಿ ಸಲ್ಲಿಸಲಾಗಿಲ್ಲ. ಕೇರಳಂ ಜನತೆ ಇದೆಲ್ಲವನ್ನು ನೋಡುತ್ತಿದ್ದಾರೆ. ಇಡೀ ದೇಶದ ವಿವಿಧ ಭಾಗದ ಜನರು ಬಹಳ ನಂಬಿಕೆ, ಭಕ್ತಿಯಿಂದ ಶಬರಿಮಲೆ ದೇವಾಲಯಕ್ಕೆ ಬರುತ್ತೇವೆ.



ಇಲ್ಲಿ ಯಾವುದೇ ಪಕ್ಷ ಇದ್ದರೂ ದೇವಾಲಯ ಹಾಗೂ ಭಕ್ತರ ಭಾವನೆ ಗೌರವಿಸುತ್ತದೆ. ದೇವರ ಚಿನ್ನವನ್ನೇ ಕದ್ದು ಹಗರಣ ಮಾಡಿದ್ದರೂ ಪ್ರಧಾನಮಂತ್ರಿಗಳು ಈ ಬಗ್ಗೆ ಒಂದೇ ಒಂದು ಮಾತು ಆಡುತ್ತಿಲ್ಲ ಎಂದರೆ ಇಲ್ಲಿ ಕೇಂದ್ರ ಬಿಜೆಪಿ ಸರ್ಕಾರ ಹಾಗೂ ರಾಜ್ಯ ಎಲ್ ಡಿಎಫ್ ಸರ್ಕಾರಗಳ ನಡುವಣ ಒಳಒಪ್ಪಂದ ಏನು? ಈ ವಿಚಾರವಾಗಿ ಸ್ಥಳೀಯ ಬಿಜೆಪಿ ನಾಯಕರಿಗಿಂತ ಪ್ರಧಾನ ಮಂತ್ರಿಗಳು ಹಾಗೂ ಕೇರಳಂನ ಮುಖ್ಯಮಂತ್ರಿಗಳು ಉತ್ತರಿಸಬೇಕು.

ನಾನು ಕೂಡ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಾಲಯಕ್ಕೆ ಮೂರ್ನಾಲ್ಕು ಬಾರಿ ಭೇಟಿ ನೀಡಿದ್ದು, ಈಗಲೂ ಭೇಟಿ ಮಾಡುತ್ತೇನೆ. ಅಯ್ಯಪ್ಪ ಸ್ವಾಮಿಯ ಮೇಲೆ ನನಗೂ ನಂಬಿಕೆ ಇದೆ" ಎಂದು ತಿಳಿಸಿದರು.

"ಕೇರಳಿಗರು ಪ್ರಜ್ಞಾವಂತರು, ವಿದ್ಯಾವಂತರು, ನಂಬಿಕಸ್ಥರು, ಶ್ರಮಜೀವಿಗಳು. ಅವರು ಹೊರ ರಾಜ್ಯಗಳಲ್ಲಿ ದುಡಿದರೂ ತಮ್ಮ ಊರಿಗೆ ಬಂದು ಹಣ ಹೂಡಿಕೆ ಮಾಡುತ್ತಾರೆ.

ಇಷ್ಟಾದರೂ ಇಲ್ಲಿನ ಸರ್ಕಾರ ಈ ವಿಚಾರವಾಗಿ ನೀತಿ ರೂಪಿಸಲು ವಿಫಲವಾಗಿದೆ. ಈ ಭಾಗದ ಅಭಿವೃದ್ಧಿ ಮಾಡಿ, ಬಂಡವಾಳ ತಂದು, ಉದ್ಯೋಗ ಸೃಷ್ಟಿಸಿ ರಾಜ್ಯದ ಜಿಡಿಪಿ ಬೆಳೆಯುವಂತೆ ಮಾಡದಿದ್ದ ಮೇಲೆ ನೀವು ಯಾವ ಕಾರಣಕ್ಕೆ ಅಧಿಕಾರದಲ್ಲಿರಬೇಕು? ಎಲ್ ಡಿಎಫ್ ಸರ್ಕಾರವನ್ನು ಕೇಂದ್ರ ಸರ್ಕಾರ ದಾಳಿ ಮಾಡುತ್ತಿಲ್ಲ, ನೀವು ಕೇಂದ್ರ ಬಿಜೆಪಿ ಸರ್ಕಾರದ ಜತೆ ಉತ್ತಮ ಬಾಂಧವ್ಯ ಹೊಂದಿದ್ದೀರಿ.

ಆದರೆ ಕರ್ನಾಟಕ, ತೆಲಂಗಾಣ, ತಮಿಳುನಾಡು ಹಾಗೂ ಇತರೆ ರಾಜ್ಯಗಳಲ್ಲಿ ವಿರೋಧ ಪಕ್ಷಗಳ ಆಡಳಿತದಲ್ಲಿ ಒಂದು ಸಣ್ಣ ಪ್ರಕರಣ, ಆರೋಪ ಬಂದರೂ ಕೂಡಲೇ ಎಫ್‌ಐಆರ್ ದಾಖಲಿಸಿ ತನಿಖಾ ಸಂಸ್ಥೆಗಳ ಮೂಲಕ ದಾಳಿ ಮಾಡಲಾಗುತ್ತದೆ. ಇಡಿ, ಸಿಬಿಐ, ಐಟಿ ಮಧ್ಯಪ್ರವೇಶಿಸುತ್ತದೆ. ಆದರೆ ಇಲ್ಲಿ ಅನೇಕ ಭ್ರಷ್ಟಾಚಾರ ಪ್ರಕರಣ ನಡೆದಿದ್ದರೂ ಯಾವುದೇ ತನಿಖೆ, ಹಸ್ತಕ್ಷೇಪವಿಲ್ಲ" ಎಂದು ಹರಿಹಾಯ್ದರು.

## ಐಟಿ ಉದ್ಯೋಗಿ ನೀರುಪಾಲು

ಚಿಕ್ಕಮಗಳೂರು: ಜಿಲ್ಲೆಯ ನರಸಿಂಹರಾಜಪುರ (ಎನ್.ಆರ್.ಪುರ) ತಾಲ್ಲೂಕಿನ ಬನ್ನೂರು ಗ್ರಾಮದ ಬಳಿ ಭದ್ರಾ ನದಿಯಲ್ಲಿ ಈಜಲು ಹೋಗಿದ್ದ ಐಟಿ ಉದ್ಯೋಗಿಯೊಬ್ಬರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ನಡೆದಿದೆ. ಮೃತ ಯುವಕನನ್ನು ಗದಗ ಮೂಲದ, ಬೆಂಗಳೂರಿನ ಖಾಸಗಿ ಐಟಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಅಭಿಷೇಕ್ (27) ಎಂದು ಗುರುತಿಸಲಾಗಿದೆ.

ಅಭಿಷೇಕ್ ಅವರು ತಮ್ಮ ಸ್ನೇಹಿತನ ಮದುವೆಯಲ್ಲಿ ಪಾಲ್ಗೊಳ್ಳಲು ಸ್ನೇಹಿತರ ಜತೆ ಸೇರಿ ಬಾಳೆಹೊನ್ನೂರು ಸಮೀಪದ ಬನ್ನೂರು ಗ್ರಾಮಕ್ಕೆ ಬಂದಿದ್ದರು. ಸ್ನೇಹಿತರೊಂದಿಗೆ ಸ್ಥಳೀಯ ಹೋಂ ಸ್ಟೇನಲ್ಲಿ ವಾಸ್ತವ್ಯ ಹೂಡಿದ್ದ ಇವರು, ಇಂದು ಬೆಳಿಗ್ಗೆ ಭದ್ರಾ ನದಿಗೆ ಈಜಲು ತೆರಳಿದ್ದರು. ಈ ವೇಳೆ ನೀರಿನ ಸೆಳೆತಕ್ಕೆ ಸಿಲುಕಿ ಅಭಿಷೇಕ್ ನಾಪತ್ತೆಯಾಗಿದ್ದರು.

ಯುವಕ ನಾಪತ್ತೆಯಾದ ವಿಷಯ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಸ್ಥಳೀಯರು ಹುಡುಕಾಟ ನಡೆಸಿದ್ದರು. ಗಂಟೆಗಳ ಕಾಲ ನಡೆಸಿದ ಕಾರ್ಯಾಚರಣೆಯ ನಂತರ, ಬನ್ನೂರು ಗ್ರಾಮದ ಸಮೀಪದ ನದಿಯಲ್ಲೇ ಅಭಿಷೇಕ್ ಅವರ ಮೃತದೇಹ ಪತ್ತೆಯಾಗಿದೆ. ಮದುವೆ ಸಂಭ್ರಮದಲ್ಲಿದ್ದ ಸ್ನೇಹಿತರು ಮತ್ತು ಕುಟುಂಬದವರಲ್ಲಿ ಈ ಘಟನೆ ತೀವ್ರ ಶೋಕವನ್ನುಂಟು ಮಾಡಿದೆ. ಬಾಳೆಹೊನ್ನೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

## ಮಹಿಳೆಮೇಲೆ ಅಮಾನವೀಯವಾಗಿ ಹಲ್ಲೆ: ಎಫ್‌ಐಆರ್

ಬೆಂಗಳೂರು: ಸಿಲಿಕಾನ್ ಸಿಟಿಯ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅತ್ಯಂತ ಭೀಕರ ಘಟನೆಯೊಂದು ನಡೆದಿದೆ. ಮನೆಯಲ್ಲಿ ಯುವಕನ ಜೊತೆಗಿದ್ದಾಳೆ ಎಂಬ ಕಾರಣಕ್ಕೆ ಪಶ್ಚಿಮ ಬಂಗಾಳ ಮೂಲದ ಮಹಿಳೆಯೊಬ್ಬರನ್ನು ಮನೆಯಿಂದ ಹೊರಗೆ ಎಳೆದು ತಂದು ಅಮಾನವೀಯವಾಗಿ ಹಲ್ಲೆ ನಡೆಸಲಾಗಿದೆ.



ಪಶ್ಚಿಮ ಬಂಗಾಳ ಮೂಲದ ಮಹಿಳೆಯು ವರ್ತೂರು ವ್ಯಾಪ್ತಿಯಲ್ಲಿ ವಾಸವಿದ್ದರು. ಆಕೆ ತನ್ನ ಮನೆಯಲ್ಲಿ ಯುವಕನೋರ್ವನ ಜೊತೆ ಇದ್ದಾಗ, ಕೆಲವು ವ್ಯಕ್ತಿಗಳು "ನಮ್ಮ ಊರಿಗೆ ಬಂದು ವೇಶ್ಯಾವಾಟಿಕೆ ನಡೆಸುತ್ತೀರಾ?" ಎಂದು ಕಿರುಚುತ್ತಾ ದಾಳಿ ಮಾಡಿದ್ದಾರೆ. ಯುವತಿಯನ್ನು ಮನೆಯಿಂದ ಹೊರಕ್ಕೆ ಎಳೆದು ತಂದು ಮನಬಂದಂತೆ ಥಳಿಸಿದ್ದಾರೆ. ಗಲಾಟೆ ಆರಂಭವಾಗುತ್ತಿದ್ದಂತೆಯೇ ಆಕೆಯ ಜೊತೆಗಿದ್ದ ಯುವಕ ಸ್ಥಳದಿಂದ ಓಡಿ ಹೋಗಿದ್ದಾನೆ.

ಹಲ್ಲೆಗೊಳಗಾದ ಮಹಿಳೆ ತೀವ್ರವಾಗಿ ಗಾಯಗೊಂಡಿದ್ದು, ಘಟನೆಗೆ ಸಂಬಂಧಿಸಿದಂತೆ ವರ್ತೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ಈಗಾಗಲೇ ಓರ್ವ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಮಹಿಳೆಯ ಖಾಸಗಿತನಕ್ಕೆ ಧಕ್ಕೆ ತಂದಿರುವ ಮತ್ತು ಹಲ್ಲೆ ನಡೆಸಿರುವ ವ್ಯಕ್ತಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ತಿಳಿಸಿದ್ದಾರೆ.

## 'ಪಾಲಿಕೆಗೊಂದು ರಸ್ತೆ ಗುಂಡಿ ಮುಚ್ಚುವ ಯಂತ್ರ ಖರೀದಿಸಿ'

ಬೆಂಗಳೂರು: ಜಿಬಿಎ ವ್ಯಾಪ್ತಿಯಲ್ಲಿ ಪ್ರತಿ ನಗರ ಪಾಲಿಕೆಗೆ ಒಂದೊಂದು ರಸ್ತೆ ಗುಂಡಿ ಮುಚ್ಚುವ ಯಂತ್ರ ಖರೀದಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಬಿಎ ವ್ಯಾಪ್ತಿಯ ವಿವಿಧ ಇಲಾಖೆಗಳೊಂದಿಗೆ ಇಂದು ನಡೆದ ಸಮನ್ವಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆಯಾ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಹಾಗೂ ವಿವಿಧ ಇಲಾಖೆಗಳು ರಸ್ತೆಗಳನ್ನು ಕತ್ತರಿಸಿ ಪುನಶ್ಚೇತನ ಮಾಡದಿರುವ ಕಡೆಗಳಲ್ಲಿ ಕೂಡಲೇ ದುರಸ್ತಿ ಕಾರ್ಯ ಕೈಗೊಳ್ಳುವ ಸಲುವಾಗಿ ಎಲ್ಲಾ ಐದು ನಗರ ಪಾಲಿಕೆಗಳಲ್ಲಿ ಒಂದೊಂದು ರಸ್ತೆ ಗುಂಡಿ ಮುಚ್ಚುವ ಯಂತ್ರ ಖರೀದಿಸಿ ಡಾಂಬರೀಕರಣ ಕಾರ್ಯ ನಡೆಸಬೇಕೆಂದು ಸೂಚಿಸಿದರು.



ನಗರದಲ್ಲಿ ವಿವಿಧ ಕಾಮಗಾರಿಗಳಿಗಾಗಿ ರಸ್ತೆ ಕತ್ತರಿಸಲು ಮಾರ್ಕ್ಸ್ ಸಾಫ್ಟ್‌ವೇರ್ ತಂತ್ರಾಂಶದ ಮೂಲಕ ಅನುಮತಿ ಪಡೆದು, ಕಾಮಗಾರಿ ಪೂರ್ಣಗೊಂಡ ಬಳಿಕ ರಸ್ತೆ ದುರಸ್ತಿ ಮಾಡದಿದ್ದಲ್ಲಿ ಪಾಲಿಕೆಯಿಂದಲೇ ದುರಸ್ತಿ ಕಾರ್ಯ ಕೈಗೊಂಡು, ಅದರ ವೆಚ್ಚವನ್ನು ಸಂಬಂಧಪಟ್ಟ ಸಂಸ್ಥೆಗಳಿಂದ ವಸೂಲಿ ಮಾಡಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಗೇಲ್ ಗ್ಯಾಸ್ ಸಂಸ್ಥೆ ವತಿಯಿಂದ ಮಾರ್ಕ್ಸ್ ಸಾಫ್ಟ್‌ವೇರ್ ಮೂಲಕ ರಸ್ತೆ ಕತ್ತರಿಸಲು ಸಲ್ಲಿಸಿರುವ ಅರ್ಜಿಗಳಿಗೆ ತ್ವರಿತವಾಗಿ ಅನುಮತಿ ನೀಡಬೇಕು. ಅನುಮತಿ ನೀಡಿದ ನಂತರ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವುದರ ಜೊತೆಗೆ, ಕತ್ತರಿಸಿದ ರಸ್ತೆ ಭಾಗವನ್ನು ಸಂಸ್ಥೆಯವರಿಂದಲೇ ಪುನಶ್ಚೇತನ ಮಾಡಿಸಬೇಕೆಂದು ಸೂಚಿಸಿದರು.

ನಗರದ ರಸ್ತೆ ಬದಿಗಳಲ್ಲಿ ಹಲವು ತಿಂಗಳುಗಳಿಂದ ನಿಲ್ಲಿಸಿರುವ ಅನಾಥ ವಾಹನಗಳನ್ನು ತೆರವುಗೊಳಿಸಲು ಕೂಡಲೇ ಟೋಯಿಂಗ್ ಕಾರ್ಯ ಪ್ರಾರಂಭಿಸಬೇಕು. ಈ ಸಂಬಂಧ ಉತ್ತರ & ಕೇಂದ್ರ ನಗರ ಪಾಲಿಕೆಯಿಂದ ಈಗಾಗಲೇ ಟೋಯಿಂಗ್ ವಾಹನಗಳನ್ನು ಸಂಚಾರಿ ಪೊಲೀಸ್ ವಿಭಾಗಕ್ಕೆ ಹಸ್ತಾಂತರಿಸಲಾಗಿದೆ. ಉತ್ತರ ನಗರ ಪಾಲಿಕೆಯಿಂದ ಅನಾಥ ವಾಹನಗಳಿರುವ ರಸ್ತೆ ಪಟ್ಟಿಯನ್ನೂ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ನಾಳೆಯಿಂದಲೇ ಟೋಯಿಂಗ್ ಕಾರ್ಯ ಪ್ರಾರಂಭಿಸಲು ಸೂಚಿಸಿದರು. ನಗರದ ವೈಟ್ ಟಾಪಿಂಗ್/ಕಾಂಕ್ರೀಟ್ ಹಾಗೂ ಇತರೆ ಪ್ರಮುಖ ರಸ್ತೆಗಳಲ್ಲಿ ನಿರ್ದಿಷ್ಟ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಿರುವಂತಹ ಪಾರ್ಕಿಂಗ್ ಬೇ ಪ್ರದೇಶಗಳನ್ನು ಹೊರತುಪಡಿಸಿ ಬೇರೆಡೆ ಪಾರ್ಕಿಂಗ್ ಮಾಡುವುದನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಂಚಾರಿ ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

ಮುಂಗಾರು ಪೂರ್ವ ಮಳೆ ಶೀಘ್ರದಲ್ಲೇ ಆರಂಭವಾಗಲಿರುವ ಹಿನ್ನೆಲೆಯಲ್ಲಿ, ರಾಜಕಾಲುವೆಗಳು ಹಾಗೂ ರಸ್ತೆ ಬದಿಯ ಶೋಲ್ಡರ್ ಡ್ರೈನ್‌ಗಳಲ್ಲಿ ಸಮರ್ಪಕವಾಗಿ ಹೂಳೆತ್ತುವ ಕಾರ್ಯವನ್ನು ಕೈಗೊಳ್ಳಬೇಕು. ಇದರಿಂದ ಮಳೆಗಾಲದಲ್ಲಿ ನೀರು ನಿಲ್ಲದಂತೆ ಹಾಗೂ ಸಮಸ್ಯೆಗಳು ಉಂಟಾಗದಂತೆ ನೋಡಿಕೊಳ್ಳಲು ಸೂಚಿಸಿದರು.

ಹೆಬ್ಬಾಳ ಜಂಕ್ಷನ್‌ನಲ್ಲಿ ಟನಲ್ ರಸ್ತೆ, ಕೆಳಸೇತುವೆ, ಮೆಟ್ರೋ ಹಾಗೂ ಸಬ್–ಅರ್ಬನ್ ರೈಲು ಸೇರಿದಂತೆ ವಿವಿಧ ಇಲಾಖೆಗಳ ಕಾಮಗಾರಿಗಳು ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿ, ಸಮಗ್ರ ನಕ್ಷೆಯನ್ನು ಸಿದ್ಧಪಡಿಸಿದ ಬಳಿಕ ಸಭೆ ಆಯೋಜಿಸಲು ಸೂಚಿಸಿದರು.

ಕೆ–100 ಜಲಮಾರ್ಗಕ್ಕೆ ಇನ್ನೂ ಕೆಲವು ಪ್ರದೇಶಗಳಿಂದ ಕೊಳಚೆ ನೀರು ಸೇರುತ್ತಿರುವುದು ಗಮನಕ್ಕೆ ಬಂದಿದ್ದು, ಇದನ್ನು ಸಂಪೂರ್ಣವಾಗಿ ತಡೆಯಲು ಜಲಮಂಡಳಿಯವರು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಈ ವೇಳೆ ಬಿಡಿಎ ಆಯುಕ್ತರಾದ ಮಣಿವಣ್ಣನ್, ನಗರ ಪಾಲಿಕೆಗಳ ಆಯುಕ್ತರುಗಳಾದ ರಾಜೇಂದ್ರ ಚೋಳನ್, ಪೊಮ್ಮಲ ಸುನೀಲ್ ಕುಮಾರ್, ರಮೇಶ್ ಡಿ.ಎಸ್., ಡಾ. ರಾಜೇಂದ್ರ ಕೆ.ವಿ., ಇಂಜಿನಿಯರಿಂಗ್ ಪ್ರಧಾನ ಅಭಿಯಂತರರಾದ ಪ್ರಹ್ಲಾದ್, ಎಲ್ಲಾ ಮುಖ್ಯ ಅಭಿಯಂತರರು ಹಾಗೂ ಮೆಟ್ರೋ, ಡಲ್ಟ್, ಬಿಡಿಎ, ಕೆ–ರೈಡ್, ರೈಲ್ವೇ, ಎನ್.ಎಚ್.ಎ.ಐ ಸೇರಿದಂತೆ ಇತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಭಾರತ ಸಾರಥಿ
06/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಟ್ರಯಂಪ್ ಮೋಟಾರ್ ಸೈಕಲ್‌ಗಳಿಂದ ಭರ್ಜರಿ ಘೋಷಣೆ



ಬೆಂಗಳೂರು

ಭಾರತದಲ್ಲಿ 1 ಲಕ್ಷ ರೀಟೇಲ್ ಮಾರಾಟದ ಮಹತ್ವದ ಮೈಲಿಗಲ್ಲು ತಲುಪಿದ ಟ್ರಯಂಪ್ ಮೋಟಾರ್‌ಸೈಕಲ್‌ಗಳು, ಇದೀಗ ಗ್ರಾಹಕರಿಗೆ ಮತ್ತೊಂದು ಸಂತಸದ ಸುದ್ದಿಯನ್ನು ನೀಡಿವೆ. ಕಂಪನಿಯು ತನ್ನ 400 ಮತ್ತು 350 ಸಿಸಿ ಶ್ರೇಣಿಯ ಮೋಟಾರ್‌ಸೈಕಲ್‌ಗಳ ಹೊಸ ಬೆಲೆಗಳನ್ನು ಘೋಷಿಸಿದ್ದು, ಗ್ರಾಹಕರು ಆನ್–ರೋಡ್ ಬೆಲೆಯಲ್ಲಿ ರೂ.21,500 ವರೆಗೆ ಉಳಿತಾಯ ಮಾಡಿಕೊಳ್ಳಬಹುದಾಗಿದೆ.
ಹೊಸ ಬೆಲೆಗಳಿಂದ ಟ್ರಯಂಪ್‌ನ ಪ್ರಖ್ಯಾತ ಸವಾರಿ ಅನುಭವ ಈಗ ಹಿಂದೆಂದಿಗಿಂತಲೂ ಹೆಚ್ಚು ಸವಾರರಿಗೆ ಲಭ್ಯವಾಗಲಿದೆ. ಟ್ರಯಂಪ್‌ನ ವಿಶಿಷ್ಟ ವಿನ್ಯಾಸ, ಅತ್ಯುತ್ತಮ ಎಂಜಿನಿಯರಿಂಗ್, ಚುರುಕಾದ ಎಂಜಿನ್ ಮತ್ತು ಪ್ರೀಮಿಯಂ ಫಿನಿಷ್‌ಗಳ ಕಾರಣದಿಂದ 400 ಶ್ರೇಣಿಯ ಬೈಕ್ ಗಳು ಈಗಾಗಲೇ
ಮಧ್ಯಮ ಸಾಮರ್ಥ್ಯದ ವಿಭಾಗದಲ್ಲಿ ಜನಪ್ರಿಯತೆ ಗಳಿಸಿವೆ.
ಕಂಪನಿಯ ಪ್ರಕಾರ, ಹಣಕಾಸು ವರ್ಷ 2026–27ರಲ್ಲಿ ಇನ್ನಷ್ಟು ವೇಗವಾದ ಬೆಳವಣಿಗೆ ಘೋಷಣೆ ಮಾಡಿದೆ.

## ವಿವಾಹ, ಸಿನಿಮಾ ಮತ್ತು ಚಲನಚಿತ್ರ ನಿರ್ಮಾಣದಲ್ಲಿ ಅನುಭವಪೂರ್ವಕ ಕಲಿಕೆ ವಿಸ್ತರಣೆ




ಬೆಂಗಳೂರು

ಕೆನಾನ್ ನ 'ಲರ್ನ್ ಟು ಅರ್ನ್' ತತ್ವದಲ್ಲಿ ಬೇರೂರಿದ ಡೀಪ್ ಡೈವ್ 2.0 ಖ್ಯಾತ ವಿವಾಹದ ಛಾಯಾಗ್ರಾಹಕ ಸಿದ್ಧು ಸೋಮ ಅವರ ನೇತೃತ್ವದಲ್ಲಿ ತಲ್ಲೀನಗೊಳಿಸುವ ಮಾಸ್ಟರ್ ಕ್ಲಾಸ್ ಮೂಲಕ ಬೆಂಗಳೂರಿಗೆ ವಿಸ್ತರಣೆ, ಕ್ರಿಯೇಟರ್ ಗಳಿಗೆ ಸುಸ್ಥಿರ ವೃತ್ತಿಗಳನ್ನು ನಿರ್ಮಿಸಿಕೊಳ್ಳಲು ಸಬಲೀಕರಣ

ಬೆಂಗಳೂರು, 2026: ತನ್ನ 'ಡೀಪ್ ಡೈವ್' ಉಪಕ್ರಮಕ್ಕೆ 2025ರಲ್ಲಿ ದೊರೆತ ಅಭೂತಪೂರ್ವ ಯಶಸ್ಸಿನಿಂದ ಭಾರತದ ಮುಂಚೂಣಿಯ ಡಿಜಿಟಲ್ ಇಮೇಜಿಂಗ್ ಕಂಪನಿಗಳಲ್ಲಿ ಒಂದಾದ ಕೆನಾನ್ ಇಂಡಿಯಾ ತನ್ನ 'ಡೀಪ್ ಡೈವ್ 2.0' ಎಂಬ ತನ್ನ ಕಲಿಕಾ ಉಪಕ್ರಮದ ಅತ್ಯಾಧುನಿಕ ಎರಡನೇ ಆವೃತ್ತಿಯನ್ನು ಪ್ರಾರಂಭಿಸಿದೆ. ತನ್ನ ಅಹಮದಾಬಾದ್ ಪ್ರಾರಂಭದ ಮೂಲಕ ವೇಗ ಪಡೆದ ಈ ಕಾರ್ಯಕ್ರಮವು ಬೆಂಗಳೂರಿಗೆ ಬಂದಿದ್ದು ಭಾಗವಹಿಸುವವರಿಗೆ ಕೆನಾನ್ ನ ಸುಧಾರಿತ ಇಮೇಜಿಂಗ್ ತಂತ್ರಜ್ಞಾನದ ಮತ್ತು ನಿಜ ಜಗತ್ತಿನ ನಿರ್ಮಾಣ ಮತ್ತು ನಿರ್ಮಾಣೋತ್ತರ ವರ್ಕ್ ಫ್ಲೋ ಕುರಿತು ಪ್ರಾಯೋಗಿಕ ಅರಿವು ನೀಡುತ್ತದೆ.

ಭಾರತದ ಕಥೆ ಹೇಳುವ ಇಕೊಸಿಸ್ಟಂ ಅಸಾಧಾರಣ ವೇಗದಲ್ಲಿ ಬೆಳೆಯುತ್ತಿದ್ದು ಈ ವಲಯವು ಉದಯೋನ್ಮುಖ ಚಲನಚಿತ್ರ ನಿರ್ಮಾಪಕರು, ಛಾಯಾಗ್ರಾಹಕರು ಮತ್ತು ವಿಡಿಯೋಗ್ರಾಫರ್ ಗಳಿಗೆ ಅಪಾರ ಅವಕಾಶ ನೀಡುತ್ತದೆ. ಆದಾಗ್ಯೂ ಈ ತೀವ್ರ ಪ್ರಗತಿಯು ಪ್ರಮುಖ ಅಂತರವನ್ನು ಗುರುತಿಸಿದೆ, ಅದು ಮುಖ್ಯವಾಗಿ ಮೆಟ್ರೋ ಮಾರುಕಟ್ಟೆಗಳ ಆಚೆಗೆ ಸುಧಾರಿತ ಇಮೇಜಿಂಗ್ ತಂತ್ರಜ್ಞಾನ, ರಚನಾತ್ಮಕ ಕೌಶಲ್ಯಾಭಿವೃದ್ಧಿ ಮತ್ತು ರಿಯಲ್–ವರ್ಲ್ಡ್ ಉದ್ಯಮದ ಅರಿವು ಸೀಮಿತವಾಗಿದೆ. ಡೀಪ್ ಡೈವ್ 2.0 ಅನ್ನು ಪ್ರಾಯೋಗಿಕ ಕಲಿಕೆ, ವೃತ್ತಿಪರ ವರ್ಕ್ ಫ್ಲೋಗಳು ಮತ್ತು ಉದ್ಯಮದ ಪರಿಣಿತಿಯ ಮೂಲಕ ಕ್ರಿಯೇಟರ್ ಗಳಿಗೆ ಸುಸ್ಥಿರ, ವೃತ್ತಿಪರ ಉದ್ಯೋಗಗಳನ್ನು ಭಾರತದ ತೀವ್ರವಾಗಿ ಬೆಳೆಯುತ್ತಿರುವ ಕ್ರಿಯೇಟರ್ ಅರ್ಥವ್ಯವಸ್ಥೆಯಲ್ಲಿ ಕಲ್ಪಿಸುತ್ತದೆ.

ಈ ಕಾರ್ಯಕ್ರಮವು ವಿವಾಹ, ಸಿನಿಮಾ ಮತ್ತು ಫ್ಯಾಷನ್ ಫಿಲ್ಮ್ ಮೇಕಿಂಗ್ ಉದ್ಯಮಗಳಿಂದ ಖ್ಯಾತ ಪರಿಣಿತರನ್ನು ತರುತ್ತಿದ್ದು ಅವರು ಕಲರ್ ಗ್ರೇಡಿಂಗ್, ಎಲ್.ಯು.ಟಿ.ಗಳು ಮತ್ತು ನಿರ್ಮಾಣೋತ್ತರ ತಂತ್ರಗಳ ಕುರಿತು ನೇರ ಪ್ರಾತ್ಯಕ್ಷಿಕೆಗಳನ್ನು ನೀಡುತ್ತಾರೆ. ಭಾಗವಹಿಸುವವರಿಗೆ ಲಾಭದಾಯಕ ಸೃಜನಶೀಲ ಉದ್ಯಮಗಳ ಕುರಿತು ಪ್ರಾಯೋಗಿಕ ಒಳನೋಟಗಳನ್ನು ಪಡೆಯುತ್ತಾರೆ ಅಲ್ಲದೆ ಕೆನಾನ್ ನ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ರಿಯಲ್–ವರ್ಲ್ಡ್ ವರ್ಕ್ ಫ್ಲೋಗಳ ಅನುಭವ ಪಡೆದುಕೊಳ್ಳುವುದಲ್ಲದೆ ಕೆನಾನ್ ಇಂಡಿಯಾದ ನಾರ್ತ್ ಸ್ಟಾರ್ ಅಲಯನ್ಸ್ ಪಾರ್ಟ್ನರ್ಸ್, ನ್ಯಾನ್ಲೈಟ್, ಹಾಲಿಲ್ಯಾಂಡ್ ಮತ್ತು ಬೆಂಕ್ಯೂಗಳ ಬೆಂಬಲವಿರುತ್ತದೆ.

## ಬಾಬು ಜಗಜೀವನರಾಂ ಜಯಂತಿ

ಶಿಡ್ಲಘಟ್ಟ

ಡಾ.ಬಾಬು ಜಗಜೀವನರಾಂ ಅವರು ಸಮಾಜದಲ್ಲಿ ಜಾತಿ ಬೇಧ ಮರೆತು ಸಮಾನತೆಗಾಗಿ ಶ್ರಮಿಸಿದ್ದ ಶ್ರೇಷ್ಠ ರಾಜಕೀಯ ಮುತ್ಸದ್ದಿ ಅವರಂತೆ ತಾಲ್ಲೂಕಿನ ಎಲ್ಲಾ ಪಂಚಾಯಿತಿಗಳಿಗೂ ಸಮಾನತೆಯಿಂದ ಕಾನುತ್ತಿದ್ದೇನೆ ಎಂದು ಶಾಸಕ ಬಿ.ಎನ್.ರವಿಕುಮಾರ್ ಹೇಳಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 119 ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಡಾ.ಬಾಬು ಜಗಜೀವನ್ ರಾಂ ಅವರು ದೇಶದ ಉಪಪ್ರಧಾನಿಯಾಗಿ ಹಾಗೂ ವಿವಿಧ ಪ್ರಮುಖ ಉದ್ದೇಗಳನ್ನು ಅಲಂಕರಿಸಿ ಶೋಷಿತರ ಪರ ಹಾಗೂ ಸಮಾಜದಲ್ಲಿ ಜಾತಿಪದ್ದರಿಯನ್ನು ಹೋಗಲಾಡಿಸಲು ಹರಾಟ ನಡೆಸಿ ಸಮಾನತೆ ತಂದವರು ಅಂತಹ ಮಹಾನುಪುರುಷರನ್ನು ಎಲ್ಲರೂ ಗೌರವಿಸಬೇಕು ಎಂದರು. 'ಕ್ಾರಿ ನೌಕರರು ಮತ್ತು ರಾಜಕಾರಣಿಗಳು ಸಂವಿಧಾನದ ಅಡಿಯಲ್ಲಿ ಕೆಲಸಮಾಡಬೇಕು ಆಗ ಸಂವಿಧಾನಕ್ಕೂ ಮತ್ತು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನಿಯರ ಆತ್ಮಕ್ಕೆ ಶಾಂತಿ ದೊರೆಯುತ್ತದೆ ಎಂದರು. ತಹಶಿಲ್ದಾರ್ ಗಗನ ಸಿಂಧು ಮಾತನಾಡಿದರು. ಪಿಎಲ್ಡಿ ಬ್ಯಾಂಕ ಅಧ್ಯಕ್ಷ ಹಾಗೂ ಚಿಮುಲ್ ನಿರ್ದೇಶಕ ಬಂಕ್ ಮುನಿಯಪ್ಪ, ಚಿಮುಲ್ ನಿರ್ದೇಶಕ ಉಜಗೂರು ರಾಮಣ್ಣ, ಮೇಲೂರು ಮಂಜುನಾಥ್, ಲಕ್ಷ್ಮಣರಾಜು, ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ದಿಗ್ಗಜ ಹೈಜಂಪರ್‌ಗೆ ಟಿಸಿಎಸ್ ವರ್ಲ್ಡ್ 10ಕೆ ಗೌರವ

ಬೆಂಗಳೂರು

ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್ ಆಗಿರುವ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ ವರ್ಲ್ಡ್ 10ಕೆ ಬೆಂಗಳೂರು 2026 (ಟಿಸಿಎಸ್ ವರ್ಲ್ಡ್ 10ಕೆ) ರೇಸ್‌ನ ಅಂತಾರಾಷ್ಟ್ರೀಯ ಕೂಟದ ರಾಯಭಾರಿಯಾಗಿ ಡಬಲ್ ಒಲಿಂಪಿಕ್ ಪದಕ ವಿಜೇತೆ ಹಾಗೂ ಎರಡು ಬಾರಿ ವಿಶ್ವ ಚಾಂಪಿಯನ್ ಬ್ಲಾಂಕಾ ವ್ಲಾಸಿಕ್ ಅವರನ್ನು ಆಯ್ಕೆ ಮಾಡಲಾಗಿದೆ. ರೇಸ್‌ನ ಪ್ರವರ್ತಕರಾದ ಪ್ರೊಕ್ಯಾಮ್ ಇಂಟರ್‌ನ್ಯಾಷನಲ್ ಈ ಘೋಷಣೆಯನ್ನು ಮಾಡಿದ್ದು, ಏಪ್ರಿಲ್ 26, 2026ರಂದು ಭಾನುವಾರ ನಡೆಯಲಿರುವ ಟಿಸಿಎಸ್ ವರ್ಲ್ಡ್ 10ಕೆ ಬೆಂಗಳೂರು 18ನೇ ಆವೃತ್ತಿಗೆ ಬ್ಲಾಂಕಾ ವ್ಲಾಸಿಕ್ ಅವರು ಜಾಗತಿಕ ಮೆರುಗು ನೀಡಲಿದ್ದಾರೆ. ಕ್ರೊಯೇಷಿಯಾದ ದಿಗ್ಗಜ ಹೈಜಂಪರ್ ಆಗಿರುವ ಬ್ಲಾಂಕಾ ವ್ಲಾಸಿಕ್, ಅಥ್ಲೆಟಿಕ್ಸ್ ಲೋಕದಲ್ಲಿ ಅಪಾರ ಸಾಧನೆ ಮಾಡಿದ ಕ್ರೀಡಾಪಟುಗಳ ಲ್ಲೊಬ್ಬರು. ದೀರ್ಘಕಾಲದ ವೃತ್ತಿಜೀವನದಲ್ಲಿ ಅವರು ಅನೇಕ ಅಂತರರಾಷ್ಟ್ರೀಯ ಪ್ರಶಸ್ತಿಗಳನ್ನು ಗೆದ್ದು ವಿಶ್ವದ ಗಮನ ಸೆಳೆದಿದ್ದಾರೆ.



ಬೀಜಿಂಗ್ 2008 ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದಿದ್ದ ಬ್ಲಾಂಕಾ, ಬಳಿಕ 2016ರ ರಿಯೊ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಪಡೆದು ತಮ್ಮ ಸಾಧನೆಯನ್ನು ಮತ್ತಷ್ಟು ಗಟ್ಟಿಗೊಳಿಸಿದ್ದರು. ಇದಲ್ಲದೆ, ಅವರು ಎರಡು ಬಾರಿ ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮಿದ್ದು, ವಿಶ್ವ ಒಳಾಂಗಣ ಚಾಂಪಿಯನ್‌ಷಿಪ್‌ಗಳಲ್ಲಿಯೂ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿ ದ್ದಾರೆ.
2009ರಲ್ಲಿ ಅವರು ದಾಖಲಿಸಿದ್ದ 2.08 ಮೀಟರ್ ವೈಯಕ್ತಿಕ ಅತ್ಯುತ್ತಮ ಸಾಧನೆ ಇಂದಿಗೂ ಕ್ರೊಯೇಷಿಯಾದ ರಾಷ್ಟ್ರೀಯ ದಾಖಲೆಯಾಗಿದೆ. ಜೊತೆಗೆ ಮಹಿಳೆಯರ ಹೈಜಂಪ್ ಇತಿಹಾಸದಲ್ಲಿ ಮೂರನೇ ಅತಿ ಹೆಚ್ಚು ಕ್ಲಿಯರೆನ್ಸ್ ಆಗಿಯೂ ಅದು ಗುರುತಿಸಿಕೊಂಡಿದೆ.

## ಒರಾಯನ್ ಮಾಲ್‌ಗಳಲ್ಲಿ 'ಒರಾಯನ್ ಫನ್ ಲೀಗ್ 2026'

ಬೆಂಗಳೂರು

ಒರಾಯನ್ ಮಾಲ್‌ಗಳ ಪ್ರಮುಖ ಬೇಸಿಗೆ ಕಾರ್ನಿವಲ್ 'ಒರಾಯನ್ ಫನ್ ಲೀಗ್' ಪ್ರಸ್ತುತ ನಡೆಯುತ್ತಿದ್ದು, ಮೇ 3, 2026ರವರೆಗೆ ಬೆಂಗಳೂರಿನ ಮೂವರು ಓರಿಯನ್ ಮಾಲ್‌ಗಳಲ್ಲಿ ನಡೆಯಲಿದೆ. ಈ ತಿಂಗಳಾವಧಿಯ ಕಾರ್ಯಕ್ರಮವು ಅತ್ಯಾಧುನಿಕ ತಂತ್ರಜ್ಞಾನ ಮತ್ತು ಸಾಂಪ್ರದಾಯಿಕ ಕಾರ್ನಿವಲ್ ಆಟಗಳ ಸಂಯೋಜನೆಯನ್ನು ಒದಗಿಸುತ್ತದೆ.
ಇಲ್ಲಿ ಎಆರ್ (ಆಗ್ಮೆಂಟೆಡ್ ರಿಯಾಲಿಟಿ) ಮತ್ತು ವಿಆರ್ (ವರ್ಚುವಲ್ ರಿಯಾಲಿಟಿ) ಅನುಭವಗಳಾದ ವಿಆರ್ ಏರ್‌ಪ್ಲೇನ್, ವಿಆರ್ ಬಂಜಿ, ಮತ್ತು ವಿಆರ್ ಸ್ಕೇರಿ ಹೌಸ್ ಸೇರಿದಂತೆ, ಸಿಮ್ ರೇಸಿಂಗ್, ಮೋಟೋ ಜಿಪಿ ಮತ್ತು ಟ್ರಿಪಲ್ ಟರ್ಬೋ ರೇಸ್ ಮುಂತಾದ ವೇಗದ ಸಿಮ್ಯುಲೇಟರ್‌ಗಳನ್ನೂ ಅನುಭವಿಸಬಹುದು. ಅದರ ಜೊತೆಗೆ ಬಾಸ್ಕೆಟ್‌ಬಾಲ್, ಏರ್ ಹಾಕಿ, ಕಿಂಗ್



ಆಫ್ ಹ್ಯಾಮರ್ ಮುಂತಾದ ಸಾಂಪ್ರದಾಯಿಕ ಮತ್ತು ಕೌಶಲ್ಯಾಧಾರಿತ ಆಟಗಳು, ಹ್ಯೂಮನ್ ಕ್ಲಾ ಮತ್ತು ಪಜಲ್ ಚಟುವಟಿಕೆಗಳಂತಹ ಸಂವಹನಾತ್ಮಕ ಸವಾಲುಗಳೂ ಇರಲಿವೆ. ದಿನಾಂಕ – ಮೇ 3, 2026ರವರೆಗೆ ಸಮಯ – ಬೆಳಗ್ಗೆ 10 ಗಂಟೆಯಿಂದ ಸ್ಥಳ–ಒರಾಯನ್ ಮಾಲ್ ರಾಜಾಜಿನಗರ, ಒರಾಯನ್ ಈಸ್ಟ್ ಮಾಲ್, ಒರಾಯನ್ ಅಪ್‌ಟೌನ್ ಮಾಲ್.

## ಲೇಕನಾ ಹೆಗ್ಡೆಗೆ ಮಿಸ್ ಯೂನಿವರ್ಸ್ ಕರ್ನಾಟಕ 2026 ಕಿರೀಟ

ಬೆಂಗಳೂರು

ಅರಮನೆ ಮೈದಾನದಲ್ಲಿರುವ ಗಾಯತ್ರಿ ವಿಹಾರ್ ಸಾಗರ್‌ನಲ್ಲಿ ನಡೆದ ಮಿಸ್ ಯೂನಿವರ್ಸ್ ಕರ್ನಾಟಕ 2026 ಗ್ರ್ಯಾಂಡ್ ಫಿನಾಲೆ ಸೌಂದರ್ಯ, ಪ್ರತಿಭೆ ಮತ್ತು ಆತ್ಮವಿಶ್ವಾಸದ ಅದ್ಭುತ ಸಂಯೋಜನೆಯಾಗಿ ಮೂಡಿಬಂದಿತು.
'ಕ್ವೀನ್ ಮೇಕರ್' ಎಂದೇ ಪ್ರಸಿದ್ಧರಾಗಿರುವ ನಂದಿನಿ ನಾಗರಾಜ್ ಅವರ ಆಯೋಜನೆಯಲ್ಲಿ ನಡೆದ ಈ ವೈಭವಮಯ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಆಯ್ಕೆಯಾದ 38 ಮಂದಿ ಫೈನಲಿಸ್ಟ್‌ಗಳು ಭಾಗವಹಿಸಿ ತಮ್ಮ ಪ್ರತಿಭೆ, ಬುದ್ಧಿವಂತಿಕೆ, ವ್ಯಕ್ತಿತ್ವ ಹಾಗೂ ವರ್ಚಸ್ಸನ್ನು ಹಲವು ಸುತ್ತುಗಳಲ್ಲಿ ಪ್ರದರ್ಶಿಸಿದರು.
ತೀವ್ರ ಸ್ಪರ್ಧೆಯ ಬಳಿಕ ಲೇಕನಾ ಹೆಗ್ಡೆ ಅವರು ಮಿಸ್ ಯೂನಿವರ್ಸ್ ಕರ್ನಾಟಕ 2026 ಕಿರೀಟವನ್ನು ತಮ್ಮದಾಗಿಸಿಕೊಂಡರು. ಸ್ಪೂರ್ತಿ ಶೆಟ್ಟಿ ಮೊದಲ ರನ್ನರ್–ಅಪ್ ಆಗಿ ಮತ್ತು ಜಾಗೃತಿ ಚೋಪ್ರಾ ಎರಡನೇ ರನ್ನರ್–ಅಪ್ ಆಗಿ ಆಯ್ಕೆಯಾದರು.
ಹದಿಹರೆಯದ ವಿಭಾಗದಲ್ಲಿ ಸಮಿಕ್ಷಾ ಪ್ರಸಾದ್



ಅವರು "ಮಿಸ್ ಟೀನ್ ಕರ್ನಾಟಕ 2026" ಪ್ರಶಸ್ತಿಯನ್ನು ಪಡೆದುಕೊಂಡರು. ಆಯುಷ್ಮಾ ಶಾಂಭವಿ ಮೊದಲ ರನ್ನರ್–ಅಪ್ ಆಗಿ ಮತ್ತು ವರ್ಷಾ ಎರಡನೇ ರನ್ನರ್–ಅಪ್ ಸ್ಥಾನವನ್ನು ಪಡೆದರು.

ಕಾರ್ಯಕ್ರಮದ ತೀರ್ಪುಗಾರರಾಗಿ ನಿಖಿಲ್ ಆನಂದ್, ಮಾಣಿಕಾ ವಿಶ್ವಕರ್ಮ, ವಂಶಿ ಉದಯ್, ಅಮ್ಜದ್ ಖಾನ್ ಹಾಗೂ ಮುಹಮ್ಮದ್ ನೈಜಲ್ ಭಾಗವಹಿಸಿದ್ದರು. ತಮ್ಮ ಉದ್ಯಮ ಅನುಭವ ಮತ್ತು ಪರಿಣತಿಯನ್ನು ಬಳಸಿ ಅವರು ಸ್ಪರ್ಧಿಗಳನ್ನು ಮೌಲ್ಯಮಾಪನ ಮಾಡಿದರು.
ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಡಾ. ಜಗದೀಶ್ ಚಂದ್ರ ಭಾಗವಹಿಸಿ ವಿಜೇತರಿಗೆ ಅಭಿನಂದನೆ ಸಲ್ಲಿಸಿದರು.
ಈ ಭವ್ಯ ಕಾರ್ಯಕ್ರಮಕ್ಕೆ ಸುಧಾ ಫ್ಯಾಷನ್ಸ್ ಮತ್ತು ಬ್ಲಷ್ ಏಸ್ಥೆಟಿಕ್ಸ್ ಅಂಡ್ ವೆಲ್‌ನೆಸ್ ಪ್ರಮುಖ ಪ್ರಾಯೋಜಕರಾಗಿ ಕೈಜೋಡಿಸಿವೆ.
'ಭಾರತ್ 24' ಕಾರ್ಯಕ್ರಮದ ಪವರ್ಡ್ ಬೈ ಪಾಲುದಾರವಾಗಿತ್ತು. ತಾರಾ ಡೆಕೋರ್ಸ್ ಸಹಭಾಗಿಯಾಗಿ, ಶಕ್ತಿ ಗ್ರೂಪ್ ಸಹಾಯಕ ಸಹಭಾಗಿಯಾಗಿ ಮತ್ತು ಗಾಯತ್ರಿ ವಿಹಾರ್ ಸಾಗರ್ ವೇದಿಕೆ ಸಹಭಾಗಿಯಾಗಿ ಕಾರ್ಯಕ್ರಮಕ್ಕೆ ಬೆಂಬಲ ನೀಡಿದವು.



ಹೊಸಪೇಟೆ: ಕನ್ನಡ ವಿಶ್ವವಿದ್ಯಾಲಯದ ತಾಂತ್ರಿಕ ವಿಭಾಗದ ವತಿಯಿಂದ ವಿವಿಧ ಕಾಮಗಾರಿಗಳಿಗೆ ಸಂಬಂಧಿಸಿದ ಗುದ್ದಲಿ ಪೂಜಾ ಕಾರ್ಯಕ್ರಮವು ಎಂ.ಪಿ. ಪ್ರಕಾಶ್ ನಗರ, ವರ್ತುಲ ರಸ್ತೆಯ ಹತ್ತಿರದ ನಗರಾಭಿವೃದ್ಧಿ ಪ್ರಾಧಿಕಾರದ ಲೇಔಟ್‌ನ ನಾಗರೀಕ ಸೌಲಭ್ಯ ನಿವೇಶನದಲ್ಲಿ ಮಾನ್ಯ ಕುಲಪತಿಗಳಾದ ಡಾ. ಡಿ.ವಿ. ಪರಮಶಿವಮೂರ್ತಿ ಅವರ ಅಧ್ಯಕ್ಷತೆಯಲ್ಲಿ ನೆರವೇರಿತು. ಸದರಿ ಕಾರ್ಯಕ್ರಮದಲ್ಲಿ ಕುಲಸಚಿವರಾದ ಡಾ.ವಿರೂಪಾಕ್ಷಿ ಪೂಜಾರಹಳ್ಳಿ, ಮಾಜಿ ಹೂಡಾ ಅಧ್ಯಕ್ಷ ಸಿದ್ಧನಗೌಡ ಅವರು, ಪ್ರಾಧ್ಯಾಪಕ ಡಾ.ಪಿ. ಮಹಾದೇವಯ್ಯ, ಉಪಕುಲಸಚಿವ ಗುರುಬಸಪ್ಪ, ತಾಂತ್ರಿಕ ವಿಭಾಗದ ಇಂಜಿನಿಯರ್‌ಗಳಾದ ಶ್ರೀನಿವಾಸಲು, ಚಂದ್ರಶೇಖರಪ್ಪ, ಕುಲಪತಿಗಳ ಆಪ್ತಕಾರ್ಯದರ್ಶಿ ಕೃಪಾಶಂಕರ, ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

## 'ಭಾರತದಲ್ಲಿ ಎಲೆಕ್ಟ್ರಾನಿಕ್ಸ್ ತಯಾರಿಕೆ ವೇಗವಾಗಿ ಬೆಳೆಯುತ್ತಿದೆ'

ಬೆಂಗಳೂರು

ಭಾರತದ ಎಲೆಕ್ಟ್ರಾನಿಕ್ಸ್ ತಯಾರಿಕಾ ಕೈಗಾರಿಕೆ ವೇಗವಾಗಿ ಬೆಳೆಯುತ್ತಿದ್ದು, ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಪ್ರಭಾವವನ್ನು ಹೆಚ್ಚಿಸಿಕೊಳ್ಳುತ್ತಿದೆ. ನಿರಂತರ ನೀತಿ ಬೆಂಬಲ, ಪರಿಪಕ್ವ ಕೈಗಾರಿಕಾ ಗುಚ್ಛಗಳು ಮತ್ತು ಜಾಗತಿಕ ಸರಬರಾಜು ಸರಪಳಿಗಳ ವಿಭಿನ್ನೀಕರಣದ ಪರಿಣಾಮವಾಗಿ ದೇಶದಲ್ಲಿ ಎಲೆಕ್ಟ್ರಾನಿಕ್ಸ್ ಕ್ಷೇತ್ರ ಹೊಸ ಹಂತವನ್ನು ತಲುಪುತ್ತಿದೆ.
ಈ ಬದಲಾವಣೆಯ ಸ್ಪಷ್ಟ ಚಿತ್ರಣ ಏಪ್ರಿಲ್ 8ರಿಂದ 10ರವರೆಗೆ ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೋ ಮಾರ್ಟ್‌ನಲ್ಲಿ ನಡೆಯಲಿರುವ 'ಎಲೆಕ್ಟ್ರಾನಿಕಾ ಇಂಡಿಯಾ' ಮತ್ತು 'ಪ್ರೊಡಕ್ಟ್ರೋನಿಕಾ ಇಂಡಿಯಾ 2026' ಕಾರ್ಯಕ್ರಮದಲ್ಲಿ ಕಾಣಿಸಿಕೊಳ್ಳಲಿದೆ.
ಜರ್ಮನಿ, ಚೀನಾ, ಅಮೆರಿಕಾ, ಜಪಾನ್ ಮತ್ತು ತೈವಾನ್ ಸೇರಿದಂತೆ 50ಕ್ಕೂ ಹೆಚ್ಚು ದೇಶಗಳ ಕಂಪನಿಗಳು ಹಾಗೂ ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇದರಿಂದ ಜಾಗತಿಕ ಎಲೆಕ್ಟ್ರಾನಿಕ್ಸ್ ಪರಿಸರ ವ್ಯವಸ್ಥೆಯಲ್ಲಿ ಭಾರತದ ಏಕೀಕರಣ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಮತ್ತೊಮ್ಮೆ ಸಾಬೀತಾಗುತ್ತಿದೆ.
ಮೆಸ್ಸೆ ಮ್ಯೂನಿಚ್ ಇಂಡಿಯಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಐಎಂಇಎ ಪ್ರದೇಶದ ಅಧ್ಯಕ್ಷ ಭೂಪಿಂದರ್ ಸಿಂಗ್ ಅವರು, 'ಎಲೆಕ್ಟ್ರಾನಿಕಾ ಇಂಡಿಯಾ' ಮತ್ತು 'ಪ್ರೊಡಕ್ಟ್ರೋನಿಕಾ ಇಂಡಿಯಾ' ಕೈಗಾರಿಕೆಯೊಂದಿಗೆ ಬೆಳೆದಿವೆ. ಈ ಬಾರಿ ಅನೇಕ ಕಂಪನಿಗಳು ಸ್ಪಷ್ಟ ಖರೀದಿ ಯೋಜನೆಗಳು ಮತ್ತು ಪಾಲುದಾರಿಕೆ ಮಾದರಿಗಳೊಂದಿಗೆ ಭಾಗವಹಿಸುತ್ತಿವೆ. ಈಗ ಈ ವೇದಿಕೆ ಕೇವಲ ಚರ್ಚೆಗೆ ಮಾತ್ರ ಸೀಮಿತವಾಗಿಲ್ಲ; ಇಲ್ಲಿ ಕೈಗಾರಿಕೆಯ ಮಹತ್ವದ ನಿರ್ಧಾರಗಳೂ ಕೈಗೊಳ್ಳಲಾಗುತ್ತಿವೆ ಎಂದು ಹೇಳಿದರು.
ಮೆಸ್ಸೆ ಮ್ಯೂನಿಚ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ರೆನ್ಹಾರ್ಡ್ ಫಿಫರ್ ಅವರು, ಜಾಗತಿಕ ಎಲೆಕ್ಟ್ರಾನಿಕ್ಸ್ ತಯಾರಿಕೆಯಲ್ಲಿ ಭಾರತದ ಪಾತ್ರ ನಿರಂತರವಾಗಿ ಬಲವಾಗುತ್ತಿದೆ. ನೀತಿ, ಹೂಡಿಕೆ ಮತ್ತು ಮಾರುಕಟ್ಟೆ ಬೇಡಿಕೆ ಒಂದೇ ದಿಕ್ಕಿನಲ್ಲಿ ಸಾಗುತ್ತಿರುವುದು ದೀರ್ಘಕಾಲಿಕ ಅಭಿವೃದ್ಧಿಗೆ ಬಲವಾದ ನೆಲೆಯನ್ನು ನಿರ್ಮಿಸುತ್ತಿದೆ ಎಂದು ಅಭಿಪ್ರಾಯಪಟ್ಟರು.
ಉತ್ತರ ಪ್ರದೇಶ ಸರ್ಕಾರದ ಮಾಹಿತಿ ತಂತ್ರಜ್ಞಾನ ಮತ್ತು ಎಲೆಕ್ಟ್ರಾನಿಕ್ಸ್ ಇಲಾಖೆಯ ಮುಖ್ಯ ಕಾರ್ಯದರ್ಶಿ ಆಲೋಕ್ ಕುಮಾರ್ ಅವರು, ರಾಜ್ಯವನ್ನು ಎಲೆಕ್ಟ್ರಾನಿಕ್ಸ್ ತಯಾರಿಕೆಯ ಪ್ರಮುಖ ಕೇಂದ್ರವನ್ನಾಗಿ ರೂಪಿಸಲು ಸರ್ಕಾರ ಬದ್ಧವಾಗಿದೆ. ಈ ಕಾರ್ಯಕ್ರಮದ ಮೂಲಕ ಸಂಪೂರ್ಣ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಒಂದೇ ವೇದಿಕೆಗೆ ತರಲಾಗುತ್ತಿದೆ ಎಂದು ಹೇಳಿದರು.
ಎಲ್‌ಸಿನಾ ಸಂಸ್ಥೆಯ ಮಹಾಸಚಿವ ರಾಜು ಗೋಯಲ್ ಅವರು, ಭಾರತದ ಮುಂದಿನ ಬೆಳವಣಿಗೆಗೆ ಘಟಕ ತಯಾರಿಕಾ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು ಅತ್ಯಗತ್ಯ ಎಂದು ಹೇಳಿದರು.
ಐಸಿಇಎ ಸಂಸ್ಥೆಯ ಅಧ್ಯಕ್ಷ ಪಂಕಜ್ ಮೊಹಿಂದ್ರೂ ಅವರು, ಭಾರತದ ಎಲೆಕ್ಟ್ರಾನಿಕ್ಸ್ ತಯಾರಿಕೆ ಈಗ ಪ್ರಮಾಣದ ಜೊತೆಗೆ ಗುಣಮಟ್ಟ ಮತ್ತು ಆಳವನ್ನೂ ಸಾಧಿಸಬೇಕಾದ ಹಂತ ತಲುಪಿದೆ. ಇದಕ್ಕಾಗಿ ಇಂತಹ ಸಹಕಾರ ವೇದಿಕೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

## ಹುಲಿಗಣತಿಗೆ ಅಳವಡಿಸಿದ್ದ ಸೆನ್ಸಾರ್ ಕ್ಯಾಮೆರಾ ಕಳವು

ಶಿವಮೊಗ್ಗ

ಜಿಲ್ಲೆಯ ವಿವಿಧ ವನ್ಯಜೀವಿ ವಿಭಾಗಗಳಲ್ಲಿ ಹುಲಿಗಣತಿ ಅಳವಡಿಸಲಾಗಿದ್ದ ಸೆನ್ಸಾರ್ ಕ್ಯಾಮೆರಾಗಳನ್ನು ಕಳ್ಳತನ ಮಾಡಲಾಗಿದೆ.

ಸಕ್ರೇಬೈಲು ವನ್ಯಜೀವಿ ವಲಯದ ವ್ಯಾಪ್ತಿಯಲ್ಲಿ ಮಾರ್ಚ್ 01 ರಿಂದ ಹುಲಿಗಣತಿ ಕಾರ್ಯ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಅರಣ್ಯದ ವಿವಿಧ ಆಯಕಟ್ಟಿನ ಜಾಗಗಳಲ್ಲಿ ಅತ್ಯಾಧುನಿಕ ಸೆನ್ಸಾರ್ ಕ್ಯಾಮೆರಾಗಳನ್ನು ಅಳವಡಿಸಲಾಗಿತ್ತು. ಸಕ್ರೇಬೈಲು ವನ್ಯಜೀವಿ ವಲಯದ ಸರ್ವೆ ನಂ.02 ರಲ್ಲಿ ಅಳವಡಿಸಲಾಗಿದ್ದ ಎರಡು ಕ್ಯಾಮರಾಗಳು ಕಳುವಾಗಿವೆ.

ಮಾ.21 ರಂದು ಮಧ್ಯಾಹ್ನ ಡಿ.ಆರ್.ಎಫ್.ಓ ಸ್ಥಳಕ್ಕೆ ಭೇಟಿ ನೀಡಿದಾಗ ಕ್ಯಾಮೆರಾಗಳು ಅಲ್ಲಿಯೇ ಇದ್ದವು. ಆದರೆ ಮಾ. 22ರಂದು ಬೆಳಿಗ್ಗೆ ಸಿಬ್ಬಂದಿ ಪರಿಶೀಲನೆಗೆ ಹೋದಾಗ ಕ್ಯಾಮೆರಾಗಳು ನಾಪತ್ತೆಯಾಗಿರುವುದು ಬೆಳಕಿಗೆ ಬಂದಿದೆ. ಸುಮಾರು 50 ಸಾವಿರ ರೂ. ಮೌಲ್ಯದ ಈ ಉಪಕರಣಗಳಿಗಾಗಿ ಅರಣ್ಯ ಸಿಬ್ಬಂದಿ ಹುಡುಕಾಟ ನಡೆಸಿದರೂ ಪತ್ತೆಯಾಗದ ಕಾರಣ ತಡವಾಗಿ ದೂರು ನೀಡಿದ್ದಾರೆ. ಇನ್ನೊಂದು ಪ್ರಕರಣದಲ್ಲಿ ಶೆಟ್ಟಿಹಳ್ಳಿ ವನ್ಯಜೀವಿ ವಿಭಾಗದ ಪುರದಾಳು ಗ್ರಾಮದ ಬಾರೇಹಳ್ಳ ಡ್ಯಾಂ ಹತ್ತಿರದ ಸರ್ವೆ ನಂ.32 ರಲ್ಲಿ ಅಳವಡಿಸಲಾಗಿದ್ದ 25 ಸಾವಿರ ರೂ. ಮೌಲ್ಯದ ಕ್ಯಾಮೆರಾ ಕಳುವಾಗಿದೆ. ಹುಲಿ ಗಣತಿಗಾಗಿ ಅಳವಡಿಸಿದ್ದ ಮೆಮೊರಿ ಕಾರ್ಡ್ ಸಹಿತ ಸೆನ್ಸಾರ್ ಕ್ಯಾಮೆರಾವನ್ನು ಕಳ್ಳರು ಹೊತ್ತೊಯ್ದಿದ್ದಾರೆ.

## ಆತ್ಮರಕ್ಷಣೆ ಕೌಶಲ್ಯ ಪ್ರತಿಯೊಬ್ಬ ಹೆಣ್ಣು ಮಗಳಿಗೂ ಅನಿವಾರ್ಯ: ಡಿಸಿ

ಹೊಸಪೇಟೆ

ಮಹಿಳೆ ಅಬಲೆಯಲ್ಲ ಸಬಲೆ. ಆತ್ಮರಕ್ಷಣೆ ಎಂಬುದು ಕೇವಲ ದೈಹಿಕ ಶಕ್ತಿಯ ಪ್ರದರ್ಶನವಲ್ಲ, ಅದು ಆತ್ಮವಿಶ್ವಾಸದ ಸಂಕೇತ. ಪ್ರತಿಯೊಬ್ಬ ಹೆಣ್ಣು ಸಂಕಷ್ಟದ ಸಮಯದಲ್ಲಿ ತನ್ನನ್ನು ತಾನು ರಕ್ಷಿಸಿಕೊಳ್ಳುವ ಕೌಶಲ್ಯ ಹೊಂದಿರಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದರು.

ನಗರದ ವಿಜಯನಗರ ಕಾಲೇಜಿನಲ್ಲಿ ವಿಜಯನಗರ ಕಾಲೇಜ್, ಮಹಿಳಾ ಸಬಲೀಕರಣ ಕೋಶ ಸಹಯೋಗದಲ್ಲಿ ಶನಿವಾರ ಆಯೋಜಿಸಲಾಗಿದ್ದ ಮಹಿಳೆಯರಿಗೆ ಸ್ವಯಂ ರಕ್ಷಣೆ ಕುರಿತ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಸಮಾಜದಲ್ಲಿ ಮಹಿಳೆಯರು ವೈದ್ಯಕೀಯ, ಕಲೆ, ವಾಸ್ತುಶಿಲ್ಪ, ಉದ್ಯಮ, ವಿಜ್ಞಾನ ಮತ್ತು ತಂತ್ರಜ್ಞಾನ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲೂ ತಮ್ಮ ಛಾಪು ಮೂಡಿಸಿದ್ದಾರೆ. ಅದಷ್ಟೇ ಅಲ್ಲದೇ ಬಾಹ್ಯಾಕಾಶ ಸಂಶೋಧನೆಯಂತಹ ಉನ್ನತ ಕ್ಷೇತ್ರಗಳಲ್ಲೂ ಮಹಿಳೆಯರು ಮುನ್ನುಗ್ಗುತ್ತಿರುವುದು ಹೆಮ್ಮೆಯ ಸಂಗತಿ. ಇಷ್ಟೆಲ್ಲಾ ಸಬಲೀಕರಣಗೊಳ್ಳುತ್ತಿದ್ದರು ಇಂದಿಗೂ ಮಹಿಳೆಯರ ಮೇಲಿನ



ಶೋಷಣೆ, ದೌರ್ಜನ್ಯ ಪ್ರಕರಣಗಳು ಮಾತ್ರ ಕಡಿಮೆಯಾಗಿಲ್ಲ. ಆದ್ದರಿಂದ ಪ್ರತಿಯೊಬ್ಬ ಮಹಿಳೆಯೂ ದೈಹಿಕವಾಗಿ ಮತ್ತು ಮಾನಸಿಕವಾಗಿ ಸಬಲರಾಗಬೇಕಿದೆ. ಈ ನಿಟ್ಟಿನಲ್ಲಿ ಪೋಷಕರು ಸಹ ಕೇವಲ ಹೆಣ್ಣು ಮಕ್ಕಳಿಗೆ ಸುರಕ್ಷಿತವಾಗಿರು ಎಂದು ಹೇಳುವುದಕ್ಕಿಂತ ಹೆಚ್ಚಾಗಿ, ಗಂಡು ಮಕ್ಕಳಿಗೆ ಹೆಣ್ಣು ಮಕ್ಕಳನ್ನು, ಗುರು ಹಿರಿಯರನ್ನು ಗೌರವಿಸುವ ಉತ್ತಮ ಸಂಸ್ಕಾರ ಕಲಿಸಬೇಕು. ಆಗದಾಗ ಸಮಾಜದಲ್ಲಿ ನಡೆಯುವ ಶೇ. 99. ರಷ್ಟು ಕೃತ್ಯಗಳನ್ನು ತಡೆಯಬಹುದು.

ಆದರೆ ಇಂದಿನ ಬದಲಾಗುತ್ತಿರುವ ಸಾಮಾಜಿಕ ಸನ್ನಿವೇಶದಲ್ಲಿ ಮಹಿಳೆಯರ ಸುರಕ್ಷತೆ ಮುಖ್ಯ. ಎಲ್ಲಾ ಸಂದರ್ಭದಲ್ಲೂ ಕೇವಲ ಕಾನೂನು ಮತ್ತು ಪೊಲೀಸ್ ವ್ಯವಸ್ಥೆಯಿಂದ ಮಾತ್ರ ಸುರಕ್ಷತೆ ಸಾಧ್ಯವಿಲ್ಲ. ಆದ್ದರಿಂದ ಪ್ರತಿಯೊಬ್ಬ ಮಹಿಳೆಯೂ ಸಮಾಜದಲ್ಲಿ ಉಂಟಾಗುವ ಸಂಕಷ್ಟದ ಸಂದರ್ಭಗಳನ್ನು ಎದುರಿಸಲು ಆತ್ಮರಕ್ಷಣಾ ತಂತ್ರಗಳನ್ನು ಕಲಿಯುವುದು ಅನಿವಾರ್ಯತೆ ಎಂದು ತಿಳಿಸಿದ ಅವರು, ಮಹಿಳಾ ಹಕ್ಕುಗಳು ಮತ್ತು ತುರ್ತು ಸಂದರ್ಭದಲ್ಲಿ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ ಮಾತನಾಡಿ, ಮಹಿಳಾ ಸಬಲೀಕರಣ ಎಂದರೆ ಸ್ವೇಚ್ಛಾಚಾರವಲ್ಲ. ಬದಲಿಗೆ ಸರಿ ತಪ್ಪು ವಿಮರ್ಶಿಸಿ ಯಾವುದು ಸರಿ ಇದೆ ಎಂಬುದನ್ನರಿತು ಮಾಡುವುದು ತಮ್ಮ ಜವಾಬ್ದಾರಿ. ವಿದ್ಯಾರ್ಥಿಗಳು ಪೋಷಕರು ನೀಡಿದ ಶಿಕ್ಷಣ ಮತ್ತು ಅವಕಾಶಗಳನ್ನು ಬಳಸಿಕೊಂಡು ಸಮಾಜದಲ್ಲಿ ಘನತೆಯ ವ್ಯಕ್ತಿಗಳಾಗಿ ಬಾಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಇಂದಿನ ಜಗತ್ತಿನಲ್ಲಿ ಮಾಹಿತಿಯ ಕೊರತೆಯಿಲ್ಲ, ಆದರೆ ಆಕರ್ಷಕವಾಗಿರುವುದಕ್ಕೆ ಮಾರುಹೋಗದೆ ಜೀವನಕ್ಕೆ ಪೂರಕವಾದುದನ್ನ ಆಯ್ದುಕೊಳ್ಳಬೇಕು. ದೈಹಿಕ ದೌರ್ಜನ್ಯದ ವಿರುದ್ಧ ಆತ್ಮರಕ್ಷಣೆ ಕಲಿಯುವುದು ಎಷ್ಟು ಮುಖ್ಯವೋ, ಸಾಮಾಜಿಕ ಮಾಧ್ಯಮಗಳ ಕೆಟ್ಟ ಪ್ರಭಾವದಿಂದ ಉಂಟಾಗುವ ಮಾನಸಿಕ ದೌರ್ಜನ್ಯದಿಂದ ರಕ್ಷಿಸಿಕೊಳ್ಳುವುದು ಅಷ್ಟೇ ಮುಖ್ಯ ಎಂದರು.

ಮಹಿಳಾ ಸಬಲೀಕರಣ ಕೋಶ ಸಂಯೋಜಕಿ ಡಾ.ಸುಷ್ಮಾ ಹೂಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅದೇ ರೀತಿ ಒಂದು ಕಡೆ ಸಾಧಕಿಯರ ಪಟ್ಟಿ ಬೆಳೆಯುತ್ತಿದ್ದರೆ, ಮತ್ತೊಂದೆಡೆ ಮಹಿಳೆಯರ ಮೇಲಿನ ದೌರ್ಜನ್ಯಗಳು ಸಹ ಏರಿಕೆಯಾಗುತ್ತಿರುವುದು ಆತಂಕಕಾರಿ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದರು. ನ್ಯಾಷನಲ್ ಕ್ರೈಂ ರೆಕಾರ್ಡ್ಸ್ ಬ್ಯೂರೋ ವರದಿಯ ಪ್ರಕಾರ ಶೇ. 40ರಷ್ಟು ಮಹಿಳೆಯರು ಇಂದಿಗೂ ಮನೆ ಮತ್ತು ಕೆಲಸದ ಸ್ಥಳಗಳಲ್ಲಿ ಅಸುರಕ್ಷಿತ ಭಾವನೆ ಹೊಂದಿದ್ದಾರೆ. ಶೇ.90.2ರಷ್ಟು ಅಪಹರಣ ಪ್ರಕರಣಗಳು, ಶೇ.31ರಷ್ಟು ಪತಿಯಿಂದಲೇ ಕಿರುಕುಳ ಹಾಗೂ ಶೇ.18ರಷ್ಟು ಲೈಂಗಿಕ ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿವೆ.

ಕೇವಲ ಕೆಲವು ಮಹಿಳೆಯರು ಸಾಧನೆ ಮಾಡುವುದು ಸಬಲೀಕರಣದ ಮಾನದಂಡವಲ್ಲ. ಸಮಾಜವು ಒಂದು ಹಕ್ಕಿಯಿದ್ದಂತೆ, ಅದಕ್ಕೆ ಸ್ತ್ರೀ ಮತ್ತು ಪುರುಷ ಎಂಬ ಎರಡು ರೆಕ್ಕೆಗಳು ಬಲವಾಗಿದ್ದಾಗ ಮಾತ್ರ ಸಮಾಜ ಪ್ರಗತಿ ಹೊಂದಲು ಸಾಧ್ಯ ಎಂದರು.

ಈ ವೇಳೆ ವಿಜಯನಗರ ಮಹಾವಿದ್ಯಾಲಯ ಆಡಳಿತ ಮಂಡಳಿ ಅಧ್ಯಕ್ಷ ಎನ್. ಮಲ್ಲಿಕಾರ್ಜುನ ಮೆಟ್ರಿ, ಪ್ರಾಂಶುಪಾಲರಾದ ಮಹಾಂತೇಶ್ ಎನ್. ಆರಾಧ್ಯಮಠ, ಕಿರ್ಲೋಸ್ಕರ್ ಎವಿ ಕ್ಲಬ್ ನ ಜಂಟಿ ಕಾರ್ಯದರ್ಶಿ ಭಾಗ್ಯ, ವಕೀಲೆ ಅನಿತಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

